688

## ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 556
2) ಸದಸ್ಯರ ಹೆಸರು : ಡಾ: ಯತ್ತಿಂದ್ರ ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು)
3) ಉತ್ತರಿಸುವ ದಿನಾಂಕ : 12.12.2024
4) ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2024-25 ನೇ ಸಾಲಿನ ಆಯವ್ಯಯದಲ್ಲಿ ಜಿ.ಎಸ್.ಟಿ ತೆರಿಗೆಯ ಅವೈಜ್ಞಾನಿಕ ಅನುಷ್ಠಾನದಿಂದ ರಾಜ್ಯಕ್ಕೆ ಕಳೆದ ಏಳು ವರ್ಷಗಳ ಅವಧಿಯಲ್ಲಿ ಒಟ್ಟು 59,274 ಕೋಟಿ ರೂ.ಗಳು 15 ನೇ ಹಣಕಾಸು ಆಯೋಗದ ಆರು ವರ್ಷದ ಅವಧಿಯಲ್ಲಿ ಕೇಂದ್ರದಿಂದ ರಾಜ್ಯಗಳಿಗೆ ಹಂಚಿಕೆಯಾಗುವ ಒಟ್ಟು ತೆರಿಗೆ ಹಂಚಿಕೆಯಾಗುವ ಒಟು ತೆರಿಗೆ ಹಂಚಿಕೆಯಲ್ಲಿ ರಾಜ್ಯಕ್ಕೆ 62,098 ಕೋಟಿ ರೂ.ಗಳು ಕೇಂದ್ರ ಸರ್ಕಾರವು ವಿಧಿಸುವ ಸೆಸ್ ಮತ್ತು ಸರ್ ಚಾರ್ಜ್ ಗಳನ್ನು ನ್ಯಾಯಯುತವಾಗಿ ರಾಜ್ಯಗಳಿಗೆ ಹಂಚಿಕೆ ಮಾಡದಿರುವುದರಿಂದ ರಾಜ್ಯಕ್ಕೆ ಕಳೆದ ಏಳು ವರ್ಷಗಳ ಅವಧಿಯಲ್ಲಿ ಒಟ್ಟು 45,322 ಕೋಟಿ ರೂ ಗಳು ಒಟ್ಟಾರೆ 1,66,694 ಕೋಟಿ ರೂ.ಗಳು ನಷ್ಟವಾಗಿರುವುದು ನಿಜವೇ; | 15 ನೇ ಹಣಕಾಸು ಆಯೋಗದ ಶಿಫಾರಸ್ಸಿನಂತೆ ರಾಜ್ಯಕ್ಕೆ ತೆರಿಗೆ ಪಾಲು ಹಂಚಿಕೆಯಾಗುತ್ತಿರುವುದರಿಂದ ಮತ್ತು ಸೆಸ್ ಹಾಗು ಸರ್ ಚಾರ್ಜ್ ಅನ್ನು ರಾಜ್ಯಗಳಿಗೆ ಹಂಚಿಕೆ ಮಾಡದಿರುವುದರಿಂದ ರಾಜ್ಯಕ್ಕೆ ಉಂಟಾಗಿರುವ ನಷ್ಟ ಈ ಕೆಳಕಂಡಂತಿದೆ<br><br>ವರ್ಷ / ನಷ್ಟ (ಕೋಟಿಗಳಲ್ಲಿ):<br>ತೆರಿಗೆ ಪಾಲಿನಲ್ಲಿ ನಷ್ಟ (2020-21 ರಿಂದ 2025-26) — 68,275<br>ಸೆಸ್ ಹಾಗು ಸರ್ ಚಾರ್ಜ್ ಹಂಚಿಕೆ ಮಾಡದಿರುವುದರಿಂದ ನಷ್ಟ (2017-18 ರಿಂದ 2024-25) — 53,359<br><br>ರಾಜ್ಯಗಳಿಗೆ ಜಿ.ಎಸ್.ಟಿ ಪರಿಹಾರವನ್ನು ನಿಲ್ಲಿಸಿರುವುದರಿಂದ ಕರ್ನಾಟಕ ರಾಜ್ಯಕ್ಕೆ 2023-24 ಹಾಗು 2024-25 ನೇ ಸಾಲಿಗೆ ಒಟ್ಟು 63,127 ಕೋಟಿ ರೂ.ಗಳು ನಷ್ಟವಾಗಿರುತ್ತದೆ. |
| ಆ) | ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳಾವುವು? | 16 ನೇ ಹಣಕಾಸು ಆಯೋಗದ ಜ್ಞಾಪಕ ಪತ್ರದಲ್ಲಿ ಮನವಿ ಮಾಡಲಾಗಿದೆ. |

ಸಂಖ್ಯೆ: ಆಇ 66 ಸಿಎಸ್ಎಲ್ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ